ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 352

ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್

ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು

ಉತ್ತರಿಸುವ ದಿನಾಂಕ : 18.02.2022

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ಸಾರಿಗೆ ಸಂಸ್ಥೆಯ ಬಸ್ಸುಗಳು ರಾಜ್ಯಾದ್ಯಂತ ಸಂಚರಿಸುವ ಸಮಯದಲ್ಲಿ ಒಂದು ತಿಂಗಳಿನಲ್ಲಿ ಪಾವತಿಸುವ ಟೋಲ್ ಮೊತ್ತವೆಷ್ಟು? (ವಿಭಾಗವಾರು ಬಸ್ಸುಗಳ ಸಂಖ್ಯೆಯೊಂದಿಗೆ ಮಾಹಿತಿ ನೀಡುವುದು)</td><td>ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿ ಪಾವತಿಸುತ್ತಿರುವ ಮಾಸಿಕ ಟೋಲ್ ಮೊತ್ತದ ವಿವರ ಈ ಕೆಳಕಂಡಂತಿದೆ:

(ರೂ. ಲಕ್ಷಗಳಲ್ಲಿ)

<table>
<tr><th>ನಿಗಮ</th><th>ಬಸ್ಸುಗಳ ಸಂಖ್ಯೆ</th><th>ಮಾಸಿಕ ಟೋಲ್ ಮೊತ್ತ</th></tr>
<tr><td>ಕ.ರಾ.ರ.ಸಾ.ನಿಗಮ</td><td>4261</td><td>664.04</td></tr>
<tr><td>ಬೆಂ.ಮ.ಸಾ.ಸಂಸ್ಥೆ</td><td>417</td><td>66.23</td></tr>
<tr><td>ವಾ.ಕ.ರ.ಸಾ.ಸಂಸ್ಥೆ</td><td>2696</td><td>285.16</td></tr>
<tr><td>ಕ.ಕ.ರ.ಸಾ.ನಿಗಮ</td><td>4522</td><td>247.39</td></tr>
<tr><td>ಒಟ್ಟು</td><td>11896</td><td>1262.82</td></tr>
</table>
ವಿಭಾಗವಾರು ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ</td></tr>
<tr><td>ಆ.</td><td>ಸಾರಿಗೆ ಸಂಸ್ಥೆಯ ಬಸ್ಸುಗಳು ಸರಕಾರಿ ವಾಹನಗಳಾಗಿರುವುದರಿಂದ ಮತ್ತು ಲಾಭ ರಹಿತ ಸೇವಾ ಸಂಸ್ಥೆಯಾಗಿರುವುದರಿಂದ ಟೋಲ್‌ನಿಂದ ವಿನಾಯಿತಿ ಪಡೆಯಲು ಕ್ರಮ ಕೈಗೊಳ್ಳಲಾಗಿದೆಯೇ; ಇಲ್ಲವಾದಲ್ಲಿ ಯಾವಾಗ ಕ್ರಮ</td><td>ನಾಲ್ಕೂ ಸಾರಿಗೆ ಸಂಸ್ಥೆಗಳು ಸಾರ್ವಜನಿಕ ಸೇವಾ ಸಂಸ್ಥೆಗಳಾಗಿರುವುದರಿಂದ ನಿಗಮಗಳ ಸಾರಿಗೆಗಳಿಗೆ ಟೋಲ್ ಬಳಕೆದಾರರ ಶುಲ್ಕ ಪಾವತಿಯಿಂದ ವಿನಾಯಿತಿಯನ್ನು ನೀಡುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವನ್ನು ಕೋರಲಾಗಿ, ಪ್ರಾಧಿಕಾರವು ಟೋಲ್ ಶುಲ್ಕ ಪಾವತಿ ಅಧಿಸೂಚನೆಯಲ್ಲಿ ಯಾವುದೇ ವಿನಾಯಿತಿ ಇಲ್ಲದಿರುವುದಾಗಿ ಹಿಂಬರಹ ನೀಡಿರುತ್ತದೆ.</td></tr>
</table>

	ಕೈಗೊಳ್ಳಲಾಗುವುದು;	ಮುಂದುವರೆದು, ಕರ್ನಾಟಕ ರಾಜ್ಯ ವ್ಯಾಪ್ತಿಯ ರಾಜ್ಯ ಹೆದ್ದಾರಿಗಳಲ್ಲಿ ಆಚರಣೆ ಮಾಡುವ ಕ.ರಾ.ರ.ಸಾ.ನಿಗಮ, ವಾ.ಕ.ರ.ಸಾ.ಸಂಸ್ಥೆ ಮತ್ತು ಕ.ಕ.ರ.ಸಾ.ನಿಗಮಗಳ ಸಾರಿಗೆಗಳಿಗೆ ಟೋಲ್ ಶುಲ್ಕದಲ್ಲಿ ವಿನಾಯಿತಿ ನೀಡುವಂತೆ ಕೋರಿ ಪ್ರಸ್ತಾವನೆಯನ್ನು ಲೋಕೋಪಯೋಗಿ ಇಲಾಖೆಗೆ ಕಳುಹಿಸಲಾಗಿದೆ. **ಬೆಂ.ಮ.ಸಾ.ಸಂಸ್ಥೆಗೆ** ಟೋಲ್ ಶುಲ್ಕದಲ್ಲಿ ವಿನಾಯಿತಿ ನೀಡುವಂತೆ ಕೋರಿ ನ್ಯಾಷನಲ್ ಹೈವೇ ಅಥಾರಿಟಿ ಆಫ್ ಇಂಡಿಯಾ ರವರಿಗೆ ಮತ್ತೊಮ್ಮೆ ಪತ್ರ ಬರೆಯಲಾಗಿದೆ. ನ್ಯಾಷನಲ್ ಹೈವೇ ಅಥಾರಿಟಿ ಆಫ್ ಇಂಡಿಯಾರವರಿಂದ ಪ್ರತಿಕ್ರಿಯೆ ಸ್ವೀಕರಿಸಿರುವುದಿಲ್ಲ.
ಇ.	ಟೋಲ್‌ನಿಂದ ವಿನಾಯಿತಿ ಪಡೆದಲ್ಲಿ ಸದರಿ ಮೊತ್ತವನ್ನು ಸಾರಿಗೆ ಸಂಸ್ಥೆಯ ಉನ್ನತಿಗಾಗಿ ಬಳಸಬಹುದಾಗಿದ್ದು, ಈ ಕುರಿತು ಸರಕಾರದ ನಿಲುವೇನು?	ರಾಜ್ಯದ ನಾಲ್ಕೂ ಸಾರಿಗೆ ಸಂಸ್ಥೆಗಳ ಬಸ್ಸುಗಳಿಗೆ ಟೋಲ್‌ನಿಂದ ವಿನಾಯಿತಿ ನೀಡಿದ್ದಲ್ಲಿ ಪ್ರಯಾಣ ದರ ಕಡಿಮೆಯಾಗಿ ಪ್ರಯಾಣಿಕರಿಗೆ ಹೊರೆ ಕಡಿಮೆಯಾಗುತ್ತದೆ. ಇದರಿಂದ ಪ್ರಯಾಣಿಕರು ಖಾಸಗಿ ವಾಹನಗಳ ಬದಲಾಗಿ ನಿಗಮದ ವಾಹನಗಳಲ್ಲಿ ಪ್ರಯಾಣಿಸುವ ಸಾಧ್ಯತೆ ಇದ್ದು, ನಿಗಮಗಳು ಸಹ ಪುನಶ್ಚೇತನವಾಗಲು ಅನುಕೂಲವಾಗುತ್ತದೆ.

ಸಂಖ್ಯೆ: ಟಿಡಿ 24 ಟಿಸಿಕ್ಯೂ 2022

(ಬಿ.ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು